ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	148
ಮಾನ್ಯ ಸದಸ್ಯರ ಹೆಸರು	ಶ್ರೀ ಯು.ಬಿ. ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ	16-07-2019
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಬೆಂಗಳೂರು ಶಕ್ತಿ ಕೇಂದ್ರವಾದ ವಿಧಾನ ಸೌಧ ಹಾಗೂ ವಿಕಾಸಸೌಧ ಸುತ್ತಮುತ್ತ ಹೈಕೋರ್ಟ್, ಬಹುಮಹಡಿ ಕಟ್ಟಡ, ವಿಶ್ವೇಶ್ವರಯ್ಯ ಕಟ್ಟಡ, ರಾಜಭವನ, ಮುಖ್ಯಮಂತ್ರಿಗಳು ಹಾಗೂ ಸಚಿವ ಸಂಪುಟ ಸದಸ್ಯರ ವಸತಿ ಗೃಹಗಳು ಮತ್ತು ಕಚೇರಿಗಳು ಕಾರ್ಯನಿರ್ವಹಿಸುತ್ತಿದ್ದು, ಗಣ್ಯರು ಒಳಗೊಂಡಂತೆ ಹತ್ತಾರು ಸಾವಿರ ಅಧಿಕಾರಿ / ನೌಕರರು ದಿನನಿತ್ಯ ಕರ್ತವ್ಯದಲ್ಲಿ ತೊಡಗಿಕೊಂಡಿರುವುದರಿಂದ ಇವರೆಲ್ಲರ ಆರೋಗ್ಯ ಭದ್ರತೆ ಸಲುವಾಗಿ ಒಂದು '108' ಆಂಬ್ಯುಲೆನ್ಸ್ ದಿನದ 24 ಗಂಟೆ ಅವಶ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಬಂದಿದೆ. ವಿಧಾನ ಸೌಧ, ವಿಕಾಸಸೌಧ, ಹೈಕೋರ್ಟ್, ಬಹುಮಹಡಿ ಕಟ್ಟಡ ಹಾಗೂ ವಿಶ್ವೇಶ್ವರಯ್ಯ ಕಟ್ಟಡದ ಸುತ್ತಮುತ್ತಲು ದಿನದ 24 ಗಂಟೆಗಳು ತುರ್ತು ಆರೋಗ್ಯ ಸೇವೆ ನೀಡಲು 108-ಆರೋಗ್ಯ ಕವಚ ಸೇವೆಯ ಒಂದು ಆಂಬ್ಯುಲೆನ್ಸ್ ವಾಹನವನ್ನು ಶಾಸಕರ ಭವನದ ಆವರಣದಲ್ಲಿ ಒದಗಿಸಲಾಗಿದೆ. ರಾಜಭವನದ ಒಳ ಆವರಣದಲ್ಲಿ ತುರ್ತು ಆರೋಗ್ಯ ಸೇವೆ ನೀಡಲು 108-ಆರೋಗ್ಯ ಕವಚ ಸೇವೆಯ ಒಂದು ಆಂಬ್ಯುಲೆನ್ಸ್ ವಾಹನವನ್ನು ಒದಗಿಸಲಾಗಿದೆ.
ಆ)	ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	

ಆಕುಕ 01 ಎಸ್‌ಬಿವಿ 2019

(ಶಿವಾನಂದ ಎಸ್ ಪಾಟೀಲ)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು